ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(5)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE: 21/1/21

# ಉಪ ಸಭಾಪತಿ ಚುನಾವಣೆ: ಆಕಾಂಕ್ಷಿಗಳು ಚುರುಕು

ಬೆಂಗಳೂರು: ಜ.29 ರಂದು ಉಪಸಭಾಪತಿ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿರುವುದರಿಂದ 3 ರಾಜಕೀಯ ಪಕ್ಷಗಳಲ್ಲಿ ಆಕಾಂಕ್ಷಿಗಳ ಹೆಸರು ಚಾಲ್ತಿಗೆ ಬಂದಿವೆ. ಬಿಜೆಪಿ ಹಾಗೂ ಜೆಡಿಎಸ್ ಸಭಾಪತಿ ಪದಚ್ಯುತಿಗೆ ನೋಟಿಸ್ ನೀಡಿರುವುದರಿಂದ ಎರಡೂ ಪಕ್ಷಗಳು ಹೊಂದಾಣಿಕೆ ಮಾಡಿಕೊಳ್ಳುತ್ತಿರುವುದರಿಂದ ಸಭಾಪತಿ ಸ್ಥಾನದ ಮೇಲೆ ಎರಡೂ ಪಕ್ಷಗಳ ಶಾಸಕರು ಕಣ್ಣಿಟ್ಟಿದ್ದಾರೆ.

ಜೆಡಿಎಸ್‌ನ ಬಸವರಾಜ ಹೊರಟ್ಟಿ ಬಹಿರಂಗವಾಗಿಯೇ ಬಿಜೆಪಿ ತಮಗೆ ಸಭಾಪತಿ ಮಾಡಲು ಬೆಂಬಲ ನೀಡುತ್ತದೆ. ಪಕ್ಷದ ವರಿಷ್ಠ ದೇವೇಗೌಡರು ಹಾಗೂ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಸಹಮತ ಇದೆ ಎಂದು ಹೇಳಿದ್ದಾರೆ. ಆದರೆ, ಬಿಜೆಪಿಯಲ್ಲಿ ಸಭಾಪತಿ ಸ್ಥಾನದ ಮೇಲೆ ಹಲವರು ಕಣ್ಣಿಟ್ಟಿದ್ದು, ಹಾಲಿ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಪದಚ್ಯುತಿ ಆಗುವವರೆಗೂ ಯಾರೂ ಸಭಾಪತಿ ವಿಷಯದ ಕುರಿತು ಬಹಿರಂಗ ಚರ್ಚೆ ಮಾಡದಂತೆ ಪಕ್ಷದ ನಾಯಕರು ಸೂಚನೆ ನೀಡಿದ್ದಾರೆ ಎಂದು ತಿಳಿದು ಬಂದಿದೆ. ಸಭಾಪತಿ ಸ್ಥಾನಕ್ಕೆ ಪ್ರಮುಖವಾಗಿ ಮೇಲ್ಮನೆಯ ಮುಖ್ಯಸಚೇತಕ ಮಹಾಂತೇಶ್ ಕವಠಗಿ ಮಠ, ಶಶಿಲ್ ನಮೋಶಿ, ಆಯನೂರು ಮಂಜುನಾಥ, ರಘುನಾಥರಾವ್ ಮಲ್ಕಾಪುರೆ, ಸುನಿಲ್ ವಲ್ಯಾಪುರೆ ಹೆಸರುಗಳು ಕೇಳಿ ಬರುತ್ತಿವೆ. ಆದರೆ, ಸಭಾಪತಿ ರಾಜೀನಾಮೆವರೆಗೂ ಅಧಿಕೃತ ಚರ್ಚೆ ಮಾಡುವಂತಿಲ್ಲ ಎಂಬ ಪಕ್ಷದ ಸೂಚನೆ ಹಿನ್ನಲೆಯಲ್ಲಿ ಆಕಾಂಕ್ಷಿಗಳು ಮೌನ ವಹಿಸಿದ್ದಾರೆ ಎಂದು ತಿಳಿದು ಬಂದಿದೆ.

ಮಹಾಂತೇಶ್ ಕವಠಗಿ ಮಠ ಸಭಾಪತಿ ಸ್ಥಾನಕ್ಕಿಂತ ಬೆಳಗಾವಿ ಲೋಕಸಭಾ ಕ್ಷೇತ್ರದ ಉಪ ಚುನಾವಣೆ ಟಿಕೆಟ್ ಪಡೆಯಲು ಪ್ರಯತ್ನ ನಡೆಸಿದ್ದಾರೆನ್ನಲಾಗುತ್ತಿದೆ. ಒಂದು ವೇಳೆ, ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡುವ ಪ್ರಸಂಗ ಬಂದರೆ, ಕೆಲವರು ಉಪ ಸಭಾಪತಿ ಸ್ಥಾನದಿಂದ ಹಿಂದೆ ಸರಿಯುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಅರುಣ್ ಶಹಾಪುರ್ ಹೆಸರೂ ಚರ್ಚೆಯಲ್ಲಿದೆ ಎನ್ನಲಾಗುತ್ತಿದೆ. ಇನ್ನು ಕಾಂಗ್ರೆಸ್ ಹಿರಿಯ ಸದಸ್ಯ ಕೆ.ಸಿ.ಕೊಂಡಯ್ಯ ಉಪ ಸಭಾಪತಿ ಸ್ಥಾನಕ್ಕೆ ಸ್ಪರ್ಧಿಸುವ ಇಂಗಿತ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.